# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 113 ಗ್ರಾನೀಸ (4)2015

2ನೇ ಮಹಡಿ, 'E' Block,
K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-09, ದಿನಾಂಕ:06.07.2015

**ಇವರಿಂದ :**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,

| **ಅತಿ ಪ್ರಾಮುಖ್ಯವಾದುದು** |
|---|
| **ನೆನಪೋಲೆ-1** |

**ಇವರಿಗೆ :**
ರಾಜ್ಯದ ಎಲ್ಲಾ (29) ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
(ಕೋಲಾರ ಜಿಲ್ಲೆ ಹೊರತುಪಡಿಸಿ)

**ಮಾನ್ಯರೆ,**

ವಿಷಯ: ರಾಜ್ಯಮಟ್ಟದಲ್ಲಿರುವ **Toll Free** ಸೆಂಟರ್‌ನಲ್ಲಿ ದಾಖಲಾಗಿರುವ ದೂರುಗಳಿಗೆ ಸಂಬಂಧಿಸಿದಂತೆ ವಹಿಸಲಾಗಿರುವ ಕ್ರಮದ ಕುರಿತು ಅನುಪಾಲನಾ ವರದಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸಮಸಂಖ್ಯೆ ಪತ್ರ ದಿನಾಂಕ:03.06.2015.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಮ್ಮ ಜಿಲ್ಲೆಗಳಲ್ಲಿನ ದೂರುಗಳ ಮಾಹಿತಿಯ ವಿವರಗಳನ್ನು ಉಲ್ಲೇಖ (1)ರ ಪತ್ರದೊಂದಿಗೆ ಅಡಕವಿರಿಸಿ, ಬಾಕಿ ಇರುವ ದೂರುಗಳ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ನೇರವಾಗಿ ಪರಿವೀಕ್ಷಣೆ ನಡೆಸುತ್ತಿರುವುದರಿಂದ, ಈ ಕುರಿತು ಕೂಡಲೇ ತಾವು ವೈಯಕ್ತಿಕ ಗಮನ ಹರಿಸಿ, ಅಗತ್ಯ ಕ್ರಮ ಕೈಗೊಂಡು ಸಮಸ್ಯೆ ಪರಿಹರಿಸಲು ಮತ್ತು ಈ ಕುರಿತು ವಹಿಸಿದ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ನೀಡಲು ಕೋರಲಾಗಿತ್ತು. ಆದರೆ ಈವರೆವಿಗೂ ಸರ್ಕಾರಕ್ಕೆ ನಿರೀಕ್ಷಿತ ಅನುಪಾಲನಾ ವರದಿಯು ಸ್ವೀಕೃತಿಯಾಗಿರುವುದಿಲ್ಲ. ಆದುದರಿಂದ ಈ ಕೂಡಲೇ ತಾವು ಈ ಕುರಿತು ವೈಯಕ್ತಿಕ ಗಮನ ಹರಿಸಿ ಅಗತ್ಯ ಜರೂರು ಕ್ರಮ ಕೈಗೊಂಡು, ಸರ್ಕಾರಕ್ಕೆ ಅನುಪಾಲನಾ ವರದಿಯನ್ನು **ಇಂದೇ ಇ-ಮೇಲ್ (E-mail: ddrwsrdpr@gmail.com)** ಮುಖೇನ ಸರ್ಕಾರಕ್ಕೆ ಸಲ್ಲಿಸಲು ಕೋರಿದೆ.

ತಮ್ಮ ವಿಶ್ವಾಸಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
**ದೂರವಾಣಿ & ಫ್ಯಾಕ್ಸ್ 22233175**
ಇ-ಮೇಲ್:ddrwsrdpr@gmail.com

**ಪ್ರತಿಯನ್ನು:**

1. ರಾಜ್ಯದ ಎಲ್ಲಾ ಜಿಲ್ಲಾ (29) ಜಿಲ್ಲಾಧಿಕಾರಿಗಳ (ಕೋಲಾರ ಜಿಲ್ಲೆ ಹೊರತುಪಡಿಸಿ) ಮಾಹಿತಿಗಾಗಿ ಮತ್ತು ಮುಂದಿನ ಜರೂರು ಕ್ರಮಕ್ಕಾಗಿ ಕೋರಿ ಸಲ್ಲಿಸಿದೆ.
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09ರವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ ಕೋರಿ ಸಲ್ಲಿಸಿದೆ.
3. ರಾಜ್ಯದ ಎಲ್ಲಾ(8) ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳುರವರುಗಳ ಮಾಹಿತಿಗಾಗಿ ಮತ್ತು ಜರೂರು ಕ್ರಮಕ್ಕಾಗಿ ಕೋರಿ ಕಳುಹಿಸಿದೆ.
4. ರಾಜ್ಯದ ಎಲ್ಲಾ (29) ಕಾರ್ಯಪಾಲಕ ಇಂಜಿನಿಯರ್‌ಗಳು, (ಕೋಲಾರ ಜಿಲ್ಲೆ ಹೊರತುಪಡಿಸಿ) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳುರವರುಗಳ ಮಾಹಿತಿಗಾಗಿ ಮತ್ತು ಜರೂರು ಕ್ರಮಕ್ಕಾಗಿ ಕಳುಹಿಸಿದೆ.
5. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿರವರುಗಳ ಮಾಹಿತಿಗಾಗಿ ಮತ್ತು ಸೂಕ್ತ ಜರೂರು ಕ್ರಮಕ್ಕಾಗಿ ಕಳುಹಿಸಿದೆ.

LD